# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | **1128** |
| ಮಾನ್ಯ ಸದಸ್ಯರ ಹೆಸರು | ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರದಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 15.12.2023 |
| ಉತ್ತರಿಸುವ ಸಚಿವರು | ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಆರ್ಥಿಕವಾಗಿ ಹಿಂದುಳಿದ ವರ್ಗದ ವಿದ್ಯಾರ್ಥಿಗಳಿಗೆ ಉನ್ನತ ಶಿಕ್ಷಣಕ್ಕಾಗಿ ನೀಡಲಾಗುವ ವಿದೇಶಿ ವ್ಯಾಸಂಗ ವೇತನವನ್ನು ಸ್ಥಗಿತಗೊಳಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಸರ್ಕಾರದ ಗಮನಕ್ಕೆ ಬಂದಿದೆ. |
| ಆ) | ಹಾಗಾದಲ್ಲಿ ಎಷ್ಟು ವರ್ಷಗಳಿಂದ ಸ್ಥಗಿತಗೊಳಿಸಲಾಗಿದೆ; | ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳ ಉನ್ನತ ವ್ಯಾಸಂಗಕ್ಕಾಗಿ 2015 ರಲ್ಲಿ ಡಿ. ದೇವರಾಜ ಅರಸು ವಿದೇಶಿ ವ್ಯಾಸಂಗ ವೇತನ ಕಾರ್ಯಕ್ರಮವನ್ನು ಪ್ರಾರಂಭಿಸಲಾಗಿದ್ದು, ಕೋವಿಡ್-19 ಸಾಂಕ್ರಾಮಿಕ ರೋಗದ ಹಿನ್ನೆಲೆಯಲ್ಲಿ 2020-21 ರಿಂದ 2022-23ನೇ ಸಾಲಿನವರೆಗೆ ಸದರಿ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಿರುವುದಿಲ್ಲ.<br><br>ಮುಂದುವರೆದು, 2023-24ನೇ ಸಾಲಿನ ಆಯವ್ಯಯದಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಗೆ ಡಿ. ದೇವರಾಜ ಅರಸು ವಿದೇಶಿ ವ್ಯಾಸಂಗ ವೇತನ ಕಾರ್ಯಕ್ರಮಕ್ಕಾಗಿ ರೂ.5.00 ಕೋಟಿಗಳ ಅನುದಾನವನ್ನು ಒದಗಿಸಲಾಗಿರುತ್ತದೆ.<br><br>ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವ್ಯಾಪ್ತಿಯ ವಿವಿಧ ನಿಗಮಗಳ ವತಿಯಿಂದ ವಿದೇಶಿ ವಿಶ್ವವಿದ್ಯಾಲಯಗಳಲ್ಲಿ ಉನ್ನತ ವ್ಯಾಸಂಗಕ್ಕೆ ವಾರ್ಷಿಕ ಗರಿಷ್ಠ ರೂ.10.00 ಲಕ್ಷಗಳಂತೆ 2 ವರ್ಷಗಳ ಕೋರ್ಸ್ ಅವಧಿಗೆ ಗರಿಷ್ಠ ರೂ.20.00 ಲಕ್ಷಗಳ ಸಾಲವನ್ನು ಶೂನ್ಯ ಬಡ್ಡಿ ದರದಲ್ಲಿ ಒದಗಿಸುವ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲಾಗುತ್ತಿದೆ. |
| ಇ) | ಈ ರೀತಿ ಸ್ಥಗಿತಗೊಳಿಸಲು ಕಾರಣಗಳೇನು; (ವಿವರಗಳೊಂದಿಗೆ ಮಾಹಿತಿ ನೀಡುವುದು) | |
| ಈ) | ಆರ್ಥಿಕವಾಗಿ ಹಿಂದುಳಿದಿರುವ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಅನ್ಯಾಯವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | |
| ಉ) | ಯಾವ ಸಾಲಿನಿಂದ ಮುಂದುವರೆಸಲು ಸರ್ಕಾರ ಕ್ರಮಕೈಗೊಳ್ಳಲಾಗುವುದು? | |

ಸಂಖ್ಯೆ:ಹಿಂವಕ 676 ಬಿಎಂಎಸ್ 2023

**(ಶಿವರಾಜ ಎಸ್. ತಂಗಡಗಿ)**
ಹಿಂದುಳಿದ ವರ್ಗಗಳ ಕಲ್ಯಾಣ
ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು